ಆ) ಲಾಧಾ ದಲ್ಲಿ 110 ಕೆ ವಿ ವಿದ್ಯುತ್ ವಿತರಣಾ ಕೇಂದ್ರದ ಕಾಮಗಾರಿಯನ್ನು ಗುತ್ತಿಗೆದಾರರಿಗೆ 2–1–2007 ರಂದು ವಹಿಸಿಕೊಡಲಾಗಿದೆ

ಇ) ಸದರಿ 110 ಕೆ ವಿ ವಿದ್ಯುತ್ ವಿತರಣಾ ಕೇಂದ್ರದ ಕಾಮಗಾರಿಯನ್ನು ಶೀಘ್ರದಲ್ಲಿಯೇ ಪ್ರಾರಂಭಿಸಲಾಗುವುದು

ಈ) ಸದರಿ 110 ಕೆ ವಿ ವಿದ್ಯುತ್ ವಿತರಣಾ ಕೇಂದ್ರದ ಕಾಮಗಾರಿಗಳನ್ನು ಸೆಪ್ಟೆಂಬರ್ 2007 ರೊಳಗೆ ಪೂರ್ಣಗೊಳಿಸುವ ಗುರಿಯನ್ನು ಹೊಂದಲಾಗಿದೆ

416 (37) ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಮಲನಗರ–ಗುನಳ್ಳಿ ರಸ್ತೆ ಸಂಗಮ ಮಾರ್ಗವಾಗಿ ಹಲಬರ್ಗಾ ಆಂಧ್ರ–ಕರ್ನಾಟಕ ಮಹಾರಾಷ್ಟ್ರ ರಾಜ್ಯಗಳನ್ನು ಕೂಡಿಸುವ ಅತಿ ಮುಖ್ಯವಾದ ರಾಜ್ಯ ಹೆದ್ದಾರಿಯು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಈ ರಸ್ತೆಯನ್ನು ಯಾವಾಗ ಸುಸ್ಥಿತಿಗೆ ತರಲಾಗುವುದು?

ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಬಂದಿದೆ

ಆ) 1 ಈ ರಾಜ್ಯ ಹೆದ್ದಾರಿಯ 69 20 ಕಿ ಮೀ ಉದ್ದದ ರಸ್ತೆಯ ನಿರ್ವಹಣೆಯನ್ನು ದಿನಾಂಕ 25 9 2005 ರಲ್ಲಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಕೈಗೊಳ್ಳಲಾಗುತ್ತಿರುವ ರಾಜ್ಯ ಹೆದ್ದಾರಿಗಳ 3 ವರ್ಷಗಳ (2005–08) ನಿರ್ವಹಣೆ ಯೋಜನೆ ಅಡಿ ಪ್ರಾರಂಭಿಸಲಾಗಿದ್ದು, ಕಾಮಗಾರಿಯು ಪ್ರಗತಿಯಲ್ಲಿದೆ

2 ರಾಷ್ಟ್ರೀಯ ಹೆದ್ದಾರಿ ವಲಯದಿಂದ ಈ ರಸ್ತೆಯ ಕಿಮೀ 0 00 ರಿಂದ 15 00 ಭಾಗದ ಸುಧಾರಣೆಗಾಗಿ ಆರ್ಥಿಕ ಪ್ರಾಮುಖ್ಯತೆ ಯೋಜನೆಯಡಿಯಲ್ಲಿ ಅಂದಾಜು ತಯಾರಿಸಿ ಕೇಂದ್ರ ಸರ್ಕಾರದ ಅನುಮೋದನೆಗೆ ಸಲ್ಲಿಸಿದ್ದು, ಅದು ಅನುಮೋದನೆಯ ಹಂತದಲ್ಲಿರುತ್ತದೆ, ಕಾಮಗಾರಿಗಾಗಿ ಈಗಾಗಲೇ ಟೆಂಡರ್ ಕರೆದಿದ್ದು, ಗುತ್ತಿಗೆದಾರರು ನೇಮಕವಾದ ನಂತರ ಕಾಮಗಾರಿಯನ್ನು ಕೈಗೊಳ್ಳಲಾಗುವುದು